ಪೊಲೀಸ್ ಠಾಣೆ ಮಂಜೂರು

687 (212) ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ತಾಲ್ಲೂಕು ಮಟ್ಟದಲ್ಲಿ ಹೆಚ್ಚುವರಿಯಾಗಿ, ಪೊಲೀಸ್ ಠಾಣೆ ಮಂಜೂರು ಮಾಡಲು ಇರುವ ಮಾನದಂಡವೇನು; (ವಿವರ ನೀಡುವುದು)

ಆ) ಮುಳಬಾಗಿಲು ತಾಲ್ಲೂಕಿನಲ್ಲಿ ಜನಸಂಖ್ಯೆ ಹೆಚ್ಚಿದ್ದು, ಈಗಿರುವ ಒಂದು ಪೊಲೀಸ್ ಠಾಣೆಯಿಂದ ಕಾನೂನು ಸುವ್ಯವಸ್ಥೆ ಕಾಪಾಡಲು ಸಾಧ್ಯವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸರ್ಕಾರದ ಗಮನಕ್ಕೆ ಬಂದಿದ್ದರೆ ಹೆಚ್ಚುವರಿಯಾಗಿ ಪೊಲೀಸ್ ಠಾಣೆ ಮಂಜೂರು ಮಾಡಲು ಏನು ಕ್ರಮ ಕೈಗೊಂಡಿದೆ?

ಶ್ರೀ ಆರ್. ಅಶೋಕ್ (ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಇಲಾಖೆ) :

ಅ) ರಾಷ್ಟ್ರೀಯ ಪೊಲೀಸ್ ಆಯೋಗ (ಶ್ರೀ ಧರ್ಮವೀರ ಸಮಿತಿ) ವರದಿಯಲ್ಲಿ, ತಾಲ್ಲೂಕು ಮಟ್ಟದಲ್ಲಿ ಹೆಚ್ಚುವರಿಯಾಗಿ ಪೊಲೀಸ್ ಠಾಣೆ ಮಂಜೂರು ಮಾಡಲು ಜನಸಾಂದ್ರತೆ, ಪ್ರದೇಶ ವ್ಯಾಪ್ತಿ (ಚದುರ ಕಿ.ಮೀ. ಗಳಲ್ಲಿ), ಆ ಪ್ರದೇಶದಲ್ಲಿ ಸಂಭವಿಸುವ ಅಪರಾಧ ಪ್ರಕರಣಗಳನ್ನು ಪರಿಗಣಿಸಿ ಈ ಕೆಳಗೆ ಸೂಚಿಸಿರುವಂತೆ ಮಾನದಂಡಗಳನ್ನು ನಿಗದಿಪಡಿಸಿದೆ.

1. ವ್ಯಾಪ್ತಿ – 75 ಮೈಲಿ / 150 ಚದರ ಕಿ.ಮೀ
2. ಅಪರಾಧ ಪ್ರಕರಣಗಳು – 300 (ವಾರ್ಷಿಕ)
3. ಜನಸಂಖ್ಯೆ – 50,000–60,000

ಈ ಮೇಲಿನ ಅಂಶಗಳೊಂದಿಗೆ, ಪರಿಸರದ ಸೂಕ್ಷ್ಮತೆ, ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳು ಸಮಾಜಬಾಹಿರ ಕೃತ್ಯಗಳು, ಅತಿಗಣ್ಯ ವ್ಯಕ್ತಿಗಳ ಚಲನವಲನ, ವಾಹನ ಸಂಚಾರ ಹಾಗೂ ಭೌಗೋಳಿಕ ಪರಿಸರವನ್ನು ಮಾನದಂಡವಾಗಿ ಪರಿಗಣಿಸಲಾಗುತ್ತದೆ.

ಆ) ಬಂದಿದೆ.

ಇ) 2012–13ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಬೆಂಗಳೂರು ನಗರದಲ್ಲಿ 3 ಸಂಚಾರಿ ಪೊಲೀಸ್ ಠಾಣೆಗಳು ಹಾಗೂ ರಾಜ್ಯದ ಇತರೆ ಜಿಲ್ಲೆಗಳಲ್ಲಿ 07 ಹೊಸ ಪೊಲೀಸ್ ಠಾಣೆಗಳು ಸೇರಿದಂತೆ ಒಟ್ಟು 10 ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲು ಘೋಷಿಸಲಾಗಿದೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಪೊಲೀಸ್ ಠಾಣೆಗಳನ್ನು ತೆರೆಯಲು ಮಂಜೂರಾತಿ ನೀಡಿ ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ 91 ಪಿಓಪಿ 2012 ದಿನಾಂಕ:03/07/2012ನ್ನು ಹೊರಡಿಸಲಾಗಿದೆ.

ರಾಜ್ಯದಲ್ಲಿ ಬಹಳಷ್ಟು ಕಡೆ ಪೊಲೀಸ್ ಠಾಣೆ ಸ್ಥಾಪನೆ ಮಾಡಲು ಕೋರಿಕೆಗಳು ಇರುತ್ತದೆ. ರಾಜ್ಯದ ಸಂಪನ್ಮೂಲ ಕೊರತೆಯಿಂದ ಒಂದೇ ಹಂತದಲ್ಲಿ ಸ್ಥಾಪಿಸಲು ಸಾಧ್ಯವಾಗುವುದಿಲ್ಲ. ಹಂತ ಹಂತವಾಗಿ ಸ್ಥಾಪನೆ ಮಾಡಲಾಗುತ್ತದೆ. ಅಂತೆಯೇ ಮುಳಬಾಗಿಲು ತಾಲ್ಲೂಕಿನಲ್ಲಿ ಹೆಚ್ಚುವರಿಯಾಗಿ ಪೊಲೀಸ್ ಠಾಣೆಯನ್ನು ಸ್ಥಾಪಿಸುವ ಕುರಿತು ಅನುದಾನ ಲಭ್ಯತೆಗೆ ಅನುಗುಣವಾಗಿ ಹಾಗೂ ಆದ್ಯತೆಯ ಮೇರೆಗೆ ಪರಿಶೀಲಿಸಲಾಗುವುದು.

ಶಿವಮೊಗ್ಗದ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯ

723 (249) ಶ್ರೀ ಕುಮಾರಸ್ವಾಮಿ ಕೆ.ಜಿ. : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಶಿವಮೊಗ್ಗ ಮೆಡಿಕಲ್ ಕಾಲೇಜು ಮತ್ತು ಮೆಗ್ಗಾನ್ ಆಸ್ಪತ್ರೆಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವೈದ್ಯರ ಸಹಿತ ವಿವರ; ಬಾಹ್ಯ ಮೂಲಗಳಿಂದ ಹೊರ ಗುತ್ತಿಗೆ ಆಧಾರದಲ್ಲಿ ನೇಮಕವಾದ ಸಿಬ್ಬಂದಿ, ಪೂರೈಕೆ ಮಾಡಿದ ಏಜೆನ್ಸಿ, ಟೆಂಡರ್ ಆದ ಮೊತ್ತ ವಿವರ ನೀಡುವುದು;

ಆ) ಶಿವಮೊಗ್ಗ ಮೆಡಿಕಲ್ ಕಾಲೇಜು ಮತ್ತು ಮೆಗ್ಗಾನ್ ಆಸ್ಪತ್ರೆಯಲ್ಲಿ ನೇಮಕಾತಿಯಲ್ಲಿ ಆಗಿರುವ ಅಕ್ರಮಗಳ ಬಗ್ಗೆ ಸರ್ಕಾರಕ್ಕೆ ಗೊತ್ತಿದೆಯೇ; ಗೊತ್ತಿದ್ದಲ್ಲಿ, ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ;